**ಸಿವಿಲ್ ಜಡ್ಜ್ ಹಾಗೂ ಹೆ.ಪ್ರ.ದ.ನ್ಯಾ.ದಃ ನ್ಯಾಯಾಲಯಃ ತರೀಕೆರೆ**

**ಸಿ.ಸಿ ಸಂಖ್ಯೆ ::1949/2023**

| | | | |
|---|---|---|---|
| **ಸಾಕ್ಷಿದಾರರ ಹೆಸರು** | : | ಸುಮಂತ್ | **PW-1** |
| **ತಂದೆಯ ಹೆಸರು** | : | ಮಂಜುನಾಥ | **CW-1** |
| **ವಯಸ್ಸು** | : | 40 ವರ್ಷ | |
| **ಉದ್ಯೋಗ** | : | ಖಾಸಗಿ ಕೆಲಸ | |
| **ವಾಸಸ್ಥಳ** | : | ಶಿವಮೊಗ್ಗ. | |

**ದಿನಾಂಕಃ07-02-2025 ರಂದು ಪ್ರಮಾಣವಚನ ಬೋಧಿಸಲಾಯಿತು.**

**:: ಮುಖ್ಯ ವಿಚಾರಣೆ :: ಮಾನ್ಯ A.P.P ರವರಿಂದ ::**

ಆರೋಪಿ ನನ್ನ ತಂದೆ. ದಿನಾಂಕ 10.07.2023 ರಂದು ನನ್ನ ತಂದೆ ಹಾಗೂ ಮೃತ ತಾಯಿ ಮಂಜುಳ ರವರು ಮೈಸೂರಿಗೆ ಯಾವುದೋ ಒಂದು ಸಮಾರಂಭಕ್ಕೆ ಹೊರಟ್ಟಿದ್ದ ಸಮಯದಲ್ಲಿ ಕುಡ್ಲೂರು ಗೇಟ್‌ನ ಹತ್ತಿರ ಅವರು ಚಾಲನೆ ಮಾಡುತ್ತಿದ್ದ KA14N9196 TOYOTA INNOVA ಕಾರಿನ ಟೈಯರ್ ಸಂಜೆ 04.45 ಗಂಟೆಗೆ ಸಿಡಿದು ಅಪಘಾತವಾಗಿರುವ ವಿಚಾರವನ್ನು ನನ್ನ ತಂದೆ ನನಗೆ ಫೋನ್ ಕರೆ ಮುಖಾಂತರ ತಿಳಿಸಿರುತ್ತಾರೆ. ನಂತರ ನಾನು ಸಂಜೆ ಸುಮಾರು 05.45 ಗಂಟೆಗೆ ನನ್ನ ತಾಯಿಯನ್ನು ಕರೆದುಕೊಂಡು ಹೋಗಿದ್ದ ವೈದ್ಯರ ಬಳಿ ಹೋಗಿ ನೋಡಲಾಗಿ ನನ್ನ ತಾಯಿಯು ಮೃತರಾಗಿರುತ್ತಾರೆ ಎನ್ನುವ ವಿಚಾರ ನನಗೆ ತಿಳಿದು ಬಂದಿರುತ್ತದೆ. ನಂತರ ನನ್ನ ತಾಯಿಯನ್ನು ಸಾರ್ವಜನಿಕರ ಸಹಾಯದಿಂದ ತರೀಕೆರೆ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ನಂತರ ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇವೆ. ಅಲ್ಲಿ ಅವರು ಮೃತರಾಗಿರುವ ವಿಚಾರ ನಮಗೆ ದೃಡಪಟ್ಟಿರುತ್ತದೆ. ಸದರಿ ಅಪಘಾತದಲ್ಲಿ ಆರೋಪಿ/ ನನ್ನ ತಂದೆಯ ಯಾವುದೇ ತಪ್ಪು ಇರುವುದಿಲ್ಲ. ಈ ಬಗ್ಗೆ ನನಗೆ ಇತರರು ತಿಳಿಸಿದ ಮೇರೆಗೆ ನಾನು ಪೊಲೀಸರಿಗೆ ಮಾಹಿತಿಯನ್ನು ನೀಡಿರುತ್ತೇನೆ ಮತ್ತು ಪೊಲೀಸರು ನನ್ನಿಂದ ಕೆಲವು ದಾಖಲಾತಿಗಳಿಗೆ ಸಹಿಯನ್ನು ಪಡೆದಿರುತ್ತಾರೆ. ಸದರಿ ದಾಖಲೆಯಲ್ಲಿ ಇರುವ ವಿಚಾರಗಳು ನನಗೆ ತಿಳಿದಿರುವುದಿಲ್ಲ.

ಸಾಕ್ಷಿಗೆ ಪ್ರಕರಣದ ದೂರನ್ನು ತೋರಿಸಲಾಗಿ ಅದರಲ್ಲಿ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ದೂರನ್ನು ನಿಪಿ1 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ1 ಎ

ಎಂದು ಗುರುತಿಸಲಾಯಿತು. ಸದರಿ ದೂರಿನಲ್ಲಿ ಏನೆಲ್ಲಾ ವಿಚಾರಗಳು ಬರೆದಿರುತ್ತದೆ ಎಂದು ನನಗೆ ಗೊತ್ತಿಲ್ಲ. ಇದನ್ನು ಹೊರತುಪಡಿಸಿ ನನಗೆ ಈ ಪ್ರಕರಣದ ಬಗ್ಗೆ ಇತರೇ ಯಾವುದೇ ಮಾಹಿತಿ ಇರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎ.ಪಿ.ಪಿ. ಯವರು ಈ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ ಅಂತೆಯೇ ಪರಿಗಣಿಸಿ ಅನುಮತಿ ನೀಡಲಾಯಿತು)

**::ಪಾಟೀಸವಾಲು :: ಮಾನ್ಯ A P P ರವರಿಂದ ::**

ನಾನು ಹೇಳುತ್ತಿರುವ ಅಪಘಾತವು ಆರೋಪಿ / ನನ್ನ ತಂದೆಯು ಅತಿವೇಗ ಹಾಗೂ ಅಜಾಗರುಕತೆಯಿಂದ ತನ್ನ ವಾಹನವನ್ನು ಚಲಿಸುತಿದ್ದ ಕಾರಣ ಆಗಿರುತ್ತದೆ ಎಂದರೆ ಸರಿಯಲ್ಲ. ಆರೋಪಿ ನನ್ನ ತಂದೆಯಾದ ಕಾರಣ ನನಗೆ ಈ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ಇದ್ದರೂ ಸಹ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**:: ಪಾಟೀ ಸವಾಲು :: ಆರೋಪಿ ಪರ ವಕೀಲರಿಂದ ::**

**( ಪಾಟೀ ಸವಾಲು ಇರುವುದಿಲ್ಲ)**

**:: ಮರುವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

sd/-

ಸಿ.ಜೆ. ಮತ್ತು ಹೆ. ಜೆ.ಎಮ್.ಎಫ್.ಸಿ.,

ತರೀಕೆರೆ .

ಸಾಕ್ಷಿಯ ಸಹಿ::

ಆರೋಪಿಗಳು ನನ್ನ ಪರಿಚಯಸ್ಥರು. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ ಮತ್ತು ನನ್ನ ಸಮಕ್ಷಮ ಆರೋಪಿಗಳು ಯಾವುದೇ ಕೃತ್ಯವನ್ನು ಎಸಗಿರುವುದಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎ.ಪಿ.ಪಿ. ಯವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ ಅಂತೆಯೇ ಪರಿಗಣಿಸಿ ಅನುಮತಿ ನೀಡಲಾಯಿತು)

**::ಪಾಟೀಸವಾಲು :: ಮಾನ್ಯ A P P ರವರಿಂದ ::**

ದಿನಾಂಕ

ಈ ಘಟನೆಯನ್ನು ನಾನು ಮತ್ತು ಚಾಸಾ 3 ರವರು ನಮ್ಮ ಕಣ್ಣಾರೆ ನೋಡಿರುತ್ತೇವೆ ಎಂದರೆ ಸರಿಯಲ್ಲ. ಸದರಿ ಜಗಳವನ್ನು ಬಿಡಿಸಿ ನಾವುಗಳು ಚಾಸಾ 1 ರವರನ್ನು ಆಸ್ಪತ್ರೆಗೆ ದಾಖಲು ಮಾಡಿರುತ್ತೆವೆ ಎಂದರೆ ಸರಿಯಲ್ಲ.

ಈ ಬಗ್ಗೆ ನಾನು ದಿನಾಂಕ 21.08.2022 ರಂದು ಪೊಲೀಸರಿಗೆ '"ನಾನು ಮೇಲೆ ಹೇಳಿದ ವಿಳಾಸದಲ್ಲಿ... ... . ನೋಡಿದರೆ ಗುರುತಿಸುತ್ತೇನೆ" ಎಂದು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಸದರಿ ಹೇಳಿಕೆಯನ್ನು ಅಲ್ಲಗಳೆದ ಕಾರಣ ಆ ಭಾಗವನ್ನು ನಿಪಿ3 ಎಂದು ಗುರುತಿಸಲಾಯಿತು. ಈ ಪ್ರಕರಣದ ಬಗ್ಗೆ ನನಗೆ ಸಂಪೂರ್ಣ ಮಾಹಿತಿ ಇದ್ದರೂ ಈಗ ಆರೋಪಿಗಳ ಜೊತೆ ಶಾಮಿಲಾಗಿ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**:: ಪಾಟೀ ಸವಾಲು :: ಆರೋಪಿ ಪರ ಶ್ರೀ. ವಕೀಲರಿಂದ ::**

**( ಪಾಟೀ ಸವಾಲು ಇರುವುದಿಲ್ಲ)**

**:: ಮರುವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

ಸಿ.ಜೆ. ಮತ್ತು ಹೆ. ಜೆ.ಎಮ್.ಎಫ್.ಸಿ.,

ತರೀಕೆರೆ

ಸಾಕ್ಷಿಯ ಸಹಿ::

ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಪೊಲೀಸರು ನನಗೆ ನ್ಯಾಯಾಲಯದಲ್ಲಿ ಹೇಳಿಕೆಯನ್ನು ನೀಡಲು ಹೇಳಿರುತ್ತಾರೆ. ಸದರಿ ಹೇಳಿಕೆಯಲ್ಲಿ ಏನು ಬರೆದಿರುತ್ತದೆ ಎಂದು ನನಗೆ ಈಗ ನೆನಪಿಲ್ಲ. ಸಾಕ್ಷಿಯು ಪ್ರಕರಣದ 164 ಸ್ಟೆಟ್ ಮೆಂಟ್ ಹಾಗೂ ಅದರಲ್ಲಿ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು 164 ಸ್ಟೆಟ್ ಮೆಂಟ್ ಅನ್ನು ನಿಪಿ2 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ2 ಎ ಎಂದು ಗುರುತಿಸಲಾಯಿತು.

ಈ ಬಗ್ಗೆ ನಾನು ನ್ಯಾಯಾಲಯದಲ್ಲಿ ನಿಪಿ2 ರಂತೆ ಹೇಳಿಕೆಯನ್ನು ಸಹ ನೀಡಿರುತ್ತೇನೆ ಎಂದರೆ ಸರಿಯಲ್ಲ.